ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಸಭೆ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ, "2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಯವರ ಪರವಾಗಿ "2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ II

(ii) ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕ 2003

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ (ಅನುಬಂಧ III)

ಆ) ವಿಧೇಯಕವನ್ನು ಹಿಂತೆಗೆದುಕೊಳ್ಳುವುದು

(1) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ 2003

ವಿಧೇಯಕವನ್ನು ಹಿಂತೆಗೆದುಕೊಳ್ಳುವುದು

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಹಿಂತೆಗೆದುಕೊಳ್ಳಲು ಸಭೆಯ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2003ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಹಿಂತೆಗೆದುಕೊಳ್ಳಲು ಅನುಮತಿ ನೀಡುವುದು."
ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ, "2002ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಹಿಂತೆಗೆದುಕೊಳ್ಳುತ್ತಿದ್ದೇನೆ."

ಅಧ್ಯಕ್ಷರು : ವಿಧೇಯಕವನ್ನು ಹಿಂತೆಗೆದುಕೊಳ್ಳಲಾಯಿತು.